**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ:** 1061/2021 **CW**-8 **PW**-8

**ಸಾಕ್ಷಿಯನ್ನು ದಿಃ** 03.06.2026 **ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಶ್ರೀನಿವಾಸಮೂರ್ತಿ |
| ತಂದೆಯ ಹೆಸರುಃ | ಮೂಡಲಗಿರಿ |
| ವಯಸ್ಸುಃ | 49 ವರ್ಷ |
| ವೃತ್ತಿಃ | ಎ ಎಸ್ ಐ ಹಿರಿಸಾವೆ ಪೋಲೀಸ್ ಠಾಣೆ |
| ವಾಸ ಸ್ಥಳಃ | ಅಗಿಲೆಯ ಗ್ರಾಮ, ಕೆ ಆರ್ ಪೇಟೆ ತಾಲ್ಲೂಕು ಮಂಡ್ಯ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನಾನು 2016 ರಿಂದ 2021 ರವರೆಗೆ ನಾನು ಚನ್ನರಾಯಪಟ್ಟಣದ ನಗರ ಪೋಲೀಸ್ ಠಾಣೆಯಲ್ಲಿ ಹೆಚ್ ಸಿ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 03.05.2021 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಚನ್ನರಾಯಪಟ್ಟಣ ಸರ್ಕಾರಿ ಆಸ್ಪತ್ರೆಯಿಂದ ಮೆಮೋ ಬಂದಿದ್ದು ಅದರಂತೆ ನಾನು ರಾತ್ರಿ 8.10 ಕ್ಕೆ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆಯುತ್ತಿದ್ದ ಚಾಸಾ-1 ರವರ ಹೇಳಿಕೆ ಪಡೆದು ಠಾಣೆಗೆ ಹಿಂದುರುಗಿ ರಾತ್ರಿ 8.50 ರ ಸಮಯದಲ್ಲಿ ಹೇಳಿಕೆ ದೂರಿನ ಆಧಾರದ ಮೇಲೆ ಠಾಣಾ ಮೊ. ಸಂಖ್ಯೆ 141/2021 ರಂತೆ ಪ್ರಕರಣವನ್ನು ದಾಖಲಿಸಿ ಪ್ರ ವ ವರದಿಯನ್ನು ತಯಾರಿಸಿ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ಸಾಕ್ಷಿ ದೂರನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೆ ನಿಪಿ-1ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿ ಪ್ರ ವ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-7 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು.

ದಿಃ 04.05.2021 ರಂದು ಬೆಳಗ್ಗೆ 10.00 ರಿಂದ 10.30 ರ ಸಮಯದಲ್ಲಿ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಚಾಸಾ-1 ರವರು ಸ್ಥಳವನ್ನು ತೋರಿಸಿ ಪಂಚರಾದ ಚಾಸಾ-5 ಮತ್ತು ಚಾಸಾ-6 ರವರ ಸಮಕ್ಷಮ ಸ್ಥಳ ಮಹಜರ್ ಕ್ರಮ ಜರುಗಿಸಿ ಸ್ಥಳದಲ್ಲಿದ್ದ ಒಂದು ಹಿಡಿ ಗಾತ್ರದ ಮರದ ದೊಣ್ಣೆಯನ್ನು ಅಮಾನತ್ತುಪಡಿಸಿಕೊಂಡಿರುತ್ತೇನೆ.

ಸಾಕ್ಷಿ ಸ್ಥಳ ಮತ್ತು ಅಮಾನತ್ತು ಮಹಜರ್ ನೋಡಿ ಗುರುತಿಸಿದ್ದು, ಅದನ್ನು ಈಗಾಗಲೆ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಡಿ) ಎಂದು ಗುರುತಿಸಲಾಯಿತು.

ಅಮಾನತ್ತುಪಡಿಸಿಕೊಂಡ ಮಾಲನ್ನು ಠಾಣಾ ಮಾಲು ಪಟ್ಟಿ ಸಂಖ್ಯೆ 89/2021 ರಲ್ಲಿ ನಮೂದಿಸಿರುತ್ತೇನೆ.

ಸಾಕ್ಷಿ ನ್ಯಾಯಾಲಯದಲ್ಲಿರುವ ಮು ಮಾ-1 ನ್ನು ನೋಡಿ ಗುರುತಿಸಿರುತ್ತಾರೆ.

ಅದೇ ದಿನ ಚಾಸಾ-2 ರಿಂದ ಚಾಸಾ-4 ರವರ ಹೇಳಿಕೆಯನ್ನು ಪಡೆದಿರುತ್ತೇನೆ.

ದಿಃ 06.05.2021 ರಂದು ಅರೋಪಿ ಠಾಣೆಗೆ ಹಾಜರಾಗಿದ್ದು ಅವರಿಗೆ ನೋಟೀಸ್ ಜಾರಿ ಮಾಡಿ ದಸ್ತಗಿರಿ ಕ್ರಮ ಜರುಗಿಸಿ ಠಾಣಾ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ.

ಸಾಕ್ಷಿ ನ್ಯಾಯಾಲಯದಲ್ಲಿರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

ದಿಃ 21.05.2021 ರಂದು ಚಾಸಾ-7 ರವರಿಂದ ಗಾಯದ ಪ್ರಮಾಣ ಪತ್ರವನ್ನು ಪಡೆದಿರುತ್ತೇನೆ.

ಸಾಕ್ಷಿ ಗಾಯದ ಪ್ರಮಾಣ ಪತ್ರವನ್ನು ನೋಡಿ ಗುರುತಿಸಿದ್ದು ಅದು ಈಗಾಗಲೇ ನಿಪಿ-5 ಎಂದು ಗುರುತಿಸಲಾಗಿದೆ.

ಅದೇ ದಿನ ತನಿಖೆಯನ್ನು ಪೂರ್ಣಗೊಳಿಸಿ ಆರೋಪಿತರ ವಿರುದ್ಧ ದೋಷಾರೋಪಣ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀಮತಿ ಕೆ ಸಿ ಬಿ ರವರಿಂದ ಃ**

ನಾನು ವೈದ್ಯರ ಸಮಕ್ಷಮ ಚಾಸಾ–1 ರವರ ಹೇಳಿಕೆಯನ್ನು ಪಡೆದಿರುತ್ತೇನೆ. ನಾನು ಆಸ್ಪತ್ರೆಗೆ ಹೋಗಿಲ್ಲ ಮತ್ತು ಚಾಸಾ–1 ರವರಿಂದ ಯಾವುದೇ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ನಿಪಿ–2 ರ ದಾಖಲೆಯನ್ನು ಠಾಣೆಯಲ್ಲಿ ತಯಾರಿಸಿ ಪಂಚರ ಸಹಿಯನ್ನು ಠಾಣೆಯಲ್ಲಿ ಪಡೆದಿದ್ದೇನೆ ಎಂದರೆ ಸರಿಯಲ್ಲ. ಪಂಚರ ಸಮಕ್ಷಮ ಮು ಮಾ –1 ನ್ನು ಅಮಾನತ್ತುಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆಯನ್ನು ಸೃಷ್ಟಿಸಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯನ್ನು ಠಾಣೆಗೆ ಕರೆಸಿಲ್ಲ ಮತ್ತು ವಿಚಾರಣೆ ಮಾಡಿಲ್ಲ ಎಂದರೆ ಸರಿಯಲ್ಲ. ಚಾಸಾ–7 ರವರ ಸುಳ್ಳು ಗಾಯದ ಪ್ರಮಾಣ ಪತ್ರ ಬರೆದಿದ್ದೇನೆ ಎಂದರೆ ಸರಿಯಲ್ಲ. ಚಾಸಾ–1 ರವರು ನೀಡಿದ ಸುಳ್ಳು ಹೇಳಿಕೆ ದೂರಿನ ಆಧಾರದ ಮೇಲೆ ಪ್ರಕರಣವನ್ನು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯ ವಿರುದ್ಧ ಸುಳ್ಳು ದೂರು ಪಡೆದು ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ತನಿಖೆ ಮಾಡಿ ಸುಳ್ಳು ದೋಷಾರೋಪಣ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).**

**ಓ ಹೇ ಕೇ ಸರಿ ಇದೆ.**

**(ಕುಸುಮ ವಿ.)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.**